ಅಸಲು ದಾವಾ ಸಂಖ್ಯೆ: 180-2020
ಪಿ. ಡಬ್ಲ್ಯೂ- **01**

<u>ದಿನಾಂಕಃ **29.01.2021** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಖ್ಯ ವಿಚಾರಣೆ ವಾದಿ ಪರ ಶ್ರೀ.ಎಸ್.ಎಸ್.ಎಂ. ವಕೀಲರಿಂದಃ</u>

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಅಂಶಗಳು ಸತ್ಯವಾಗಿದೆ. ಅದನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿದ್ದು ಅದರಲ್ಲಿ ನನ್ನ ಸಹಿ ಇದೆ.

<u>ಮುಂದುವರೆದ ಮುಖ್ಯ ವಿಚಾರಣೆಃ</u>

ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ದಾವಾ ಸ್ವತ್ತಿಗೆ ಸಂಬಂಧಿಸಿದ ಪಹಣಿಪತ್ರಿಕೆ ನಿ.ಪಿ. **-01** ಎಂದು,
2. ದಾವಾ ಸ್ವತ್ತಿಗೆ ಸಂಬಂಧಿಸಿದ ಆರು ಹಳೆಯ ಪಹಣಿಪತ್ರಿಕೆಗಳನ್ನು ನಿ.ಪಿ. **-02** ರಿಂದ **08** ಎಂದು,
3. ದಾವಾ ಸ್ವತ್ತಿಗೆ ಸಂಬಂಧಿಸಿದ ನಾಲ್ಕು ಕೈಬರಹದ ಆರ್.ಟಿ.ಸಿ. ಪ್ರತಿಗಳನ್ನು ನಿ.ಪಿ. **-09** ರಿಂದ **12** ಎಂದು,
4. ಎರಡು ಕಂದಾಯ ರಶೀದಿಗಳನ್ನು ನಿ.ಪಿ. **-13** ಮತ್ತು **14** ಎಂದು,
5. ದಿನಾಂಕಃ04.05.1973 ರ ಕ್ರಯ ಪತ್ರದ ದೃಢೀಕೃತ ನಕಲನ್ನು ನಿ.ಪಿ. **-15** ಎಂದು,
6. ಒಂದು ಮರಣ ಪತ್ರವನ್ನು ನಿ.ಪಿ. **-16** ಎಂದು ಗುರುತಿಸಲಾಯಿತು.

(ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದರಿಂದ ಮುಂದೂಡಲಾಯಿತು).

<u>ತೆರದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>

<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>

ಸಹಿ/-
**ಹೆಃಸಿ.ನ್ಯಾ. ಹಾಗೂ ಪ್ರ.ವ.ನ್ಯಾದಂ.**
**ಪಿರಿಯಾಪಟ್ಟಣ.**